**Akashvani: Bangalore**
**Regional Bulletin In Kannada**
**12.02.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.02.2026: 14.30hrs**

*********

**ಮುಖ್ಯಾಂಶಗಳು :**

1. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ; ಸಂಜೆ ನಡೆಯುವ ಸಂಪುಟ ಸಭೆಯಲ್ಲಿ ಅಂತಿಮ ನಿರ್ಧಾರ - ಗೃಹ ಸಚಿವ ಡಾ. ಜಿ. ಪರಮೇಶ್ವರ್
2. ಅಬಕಾರಿ, ವಾಣಿಜ್ಯ ತೆರಿಗೆ, ಸಾರಿಗೆ ಇಲಾಖೆಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಮಾಲೋಚನೆ
3. ನವದೆಹಲಿಯಲ್ಲಿ ಪಕ್ಷದ ಉನ್ನತ ನಾಯಕರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚರ್ಚೆ
4. ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ; ಅಧಿಕಾರಿಗಳ ಅಕ್ರಮ ಆಸ್ತಿ, ದಾಖಲೆಗಳ ಪರಿಶೀಲನೆ
5. ಬೆಂಗಳೂರಿನ ಮೆಟ್ರೋ ರೆಡ್ ಲೈನ್, ಡಬ್ಬಲ್ ಡೆಕ್ಕರ್ ಯೋಜನೆಗೆ ಕೇಂದ್ರ ಸರ್ಕಾರ ತಡೆ - ಸಂಸದ ಪಿ.ಸಿ. ಮೋಹನ್ ಮಾಹಿತಿ

**********

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯಗಳನ್ನು ಆಯೋಜಿಸಲು ಅನುಮತಿ ನೀಡುವ ಕುರಿತಂತೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅಧ್ಯಕ್ಷತೆಯಲ್ಲಿ ವಿಧಾನಸೌಧದಲ್ಲಿಂದು ಉನ್ನತ ಮಟ್ಟದ ಸಭೆ ನಡೆಯಿತು. ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ನಡೆಸಲು ಕೆಎಸ್‌ಸಿಎ ಅಧಿಕಾರಿಗಳು ಸಿದ್ಧರಾಗಿದ್ದಾರೆ. ಉದ್ಘಾಟನಾ ಪಂದ್ಯ ಬೆಂಗಳೂರಿನಲ್ಲೇ ನಡೆಸಲು ಅನುಮತಿ ಕೋರಿದ್ದಾರೆ. ಜೊತೆಗೆ ಸಮಿತಿಯು ವರದಿ ನೀಡಿದ್ದು, ಸಾಧಕ-ಬಾಧಕಗಳ ಬಗ್ಗೆಯೂ ಇಂದಿನ ಸಭೆಯಲ್ಲಿ ಚರ್ಚೆಯಾಗಿದೆ ಎಂದು ತಿಳಿಸಿದ್ದಾರೆ. ಸಂಜೆ ನಡೆಯುವ ಸಂಪುಟ ಸಭೆಯಲ್ಲಿ ಈ ಕುರಿತಂತೆ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***ಧ್ವನಿ**** ಪರಮೇಶ್ವರ್

ಸಭೆಯಲ್ಲಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಡಾ. ಎಂ.ಎ. ಸಲೀಂ, ಗೃಹ ಕಾರ್ಯದರ್ಶಿ ಕೆ.ವಿ. ಶರತ್ ಚಂದ್ರ, ಜಿ.ಬಿ.ಎ. ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿದ್ದರು.

**********

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ೨೦೨೬-೨೭ನೇ ಸಾಲಿನ ಆಯವ್ಯಯ ಸಂಬಂಧ ವಾಣಿಜ್ಯ ತೆರಿಗೆಗಳು, ಅಬಕಾರಿ, ಸಾರಿಗೆ, ಮುದ್ರಾಂಕ ಮತ್ತು ನೋಂದಣಿ, ಗಣಿ ಮತ್ತು ಭೂವಿಜ್ಞಾನ ಇಲಾಖೆ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ. ಈ ನಡುವೆ, ಕೇಂದ್ರ ಸರ್ಕಾರದ ರೈತ ವಿರೋಧಿ ನೀತಿಗಳ ವಿರುದ್ಧ ರೈತ ಮುಖಂಡ ಕುರುಬೂರು ಶಾಂತಕುಮಾರ್ ನೇತೃತ್ವದಲ್ಲಿ ಸಂಯುಕ್ತ ಕಿಸಾನ್ ಮೋರ್ಚಾದ ಮುಖಂಡರು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದರು.

**********

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನವದೆಹಲಿಯಲ್ಲಿಂದು ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿದ್ದಾರೆ. ಬಳಿಕ ಅಧಿಕಾರ ಹಂಚಿಕೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಪಕ್ಷದ ನಾಯಕರನ್ನು ಈಗಾಗಲೇ ಭೇಟಿ ಮಾಡಿದ್ದು, ಕಾಲವೇ ಉತ್ತರ ನೀಡಲಿದೆ ಎಂದು ಹೇಳಿದ್ದಾರೆ. ಬೀದಿಯಲ್ಲಿ ನಿಂತು ರಾಜಕೀಯ ಮಾಡಲು ಸಿದ್ಧವಿಲ್ಲ ಎಂದು ತಿಳಿಸಿದ್ದಾರೆ. ಇನ್ನೊಂದೆಡೆ ರಾಮನಗರದಲ್ಲಿ ಪ್ರತಿಕ್ರಿಯಿಸಿರುವ ಶಾಸಕ ಇಕ್ಬಾಲ್ ಹುಸೇನ್, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು ಎಂದು ಪಕ್ಷದ ೮೦ ರಿಂದ ೯೦ ಶಾಸಕರು ಬಯಸಿದ್ದಾರೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ನಡುವೆ, ಕೆಲವು ಕಾಂಗ್ರೆಸ್ ಶಾಸಕರು ಕೈಗೊಂಡಿರುವ ವಿದೇಶ ಪ್ರವಾಸವನ್ನು ಕಾಂಗ್ರೆಸ್ ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಪ್ರವಾಸದಲ್ಲಿ ಭಾಗವಹಿಸುವ ಶಾಸಕರ ವಿವರ ಕೋರಿದ್ದಾರೆ ಎಂದು ತಿಳಿಸಿದೆ.

**********

ರಾಜ್ಯದ ವಿವಿಧೆಡೆ ಇಂದು ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೆಂಗಳೂರು, ಮೈಸೂರು, ದಾವಣಗೆರೆ, ಶಿವಮೊಗ್ಗ ಸೇರಿದಂತೆ ಹಲವೆಡೆ ಭ್ರಷ್ಟ ಅಧಿಕಾರಿಗಳ ಅಕ್ರಮ ಆಸ್ತಿ

ಹಾಗೂ ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ದಾವಣಗೆರೆ ಬೆಸ್ಕಾಂ ಸಿವಿಲ್ ವಿಭಾಗದ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಆರ್ .ಎಚ್. ಅರ್ಜುನ್ ಅವರಿಗೆ ಸೇರಿದ ನಿವಾಸ ಹಾಗೂ ಕಚೇರಿಗಳ ಮೇಲೆ ಲೋಕಾಯುಕ್ತ ಪೊಲೀಸರು ಇಂದು ದಾಳಿ ನಡೆಸಿದ್ದಾರೆ. ದಾವಣಗೆರೆ ಮತ್ತು ಶಿವಮೊಗ್ಗದ ಲೋಕಾಯುಕ್ತ ಪೊಲೀಸರ ಜಂಟಿ ತಂಡವು ಈ ಕಾರ್ಯಾಚರಣೆ ನಡೆಸಿದೆ. ಎಂಜಿನಿಯರ್ ಅರ್ಜುನ್ ಅವರಿಗೆ ಸಂಬಂಧಿಸಿದ ಒಟ್ಟು ನಾಲ್ಕು ಕಡೆಗಳಲ್ಲಿ ಏಕಕಾಲಕ್ಕೆ ಶೋಧ ಕಾರ್ಯ ನಡೆಸಲಾಗಿದ್ದು, ಶಿವಮೊಗ್ಗದಲ್ಲಿ ಅರ್ಜುನ ಅವರ ನಿವಾಸ, ಫಾರ್ಮ್ ಹೌಸ್ ಮೇಲೂ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ.

**********

ಬೆಂಗಳೂರಿನಲ್ಲಿ ಮೆಟ್ರೋ ರೆಡ್ ಲೈನ್ ಹಾಗೂ ಡಬ್ಬಲ್ ಡೆಕ್ಕರ್ ಯೋಜನೆಯನ್ನು ಕೇಂದ್ರ ಸರ್ಕಾರ ಸ್ಥಗಿತಗೊಳಿಸಿದೆ. ೨೮ ಸಾವಿರದ ೪೦೫ ಕೋಟಿ ರೂಪಾಯಿ ವೆಚ್ಚದ ಹೆಬ್ಬಾಳ - ಸರ್ಜಾಪುರ ಮೆಟ್ರೋ ಕಾರಿಡಾರ್‌ನ ಡಬ್ಬಲ್ ಡೆಕ್ಕರ್ ಯೋಜನೆಗೆ ಕೇಂದ್ರ ಸರ್ಕಾರ ತಡೆ ನೀಡಿದೆ ಎಂದು ಸಂಸದ ಪಿ.ಸಿ. ಮೋಹನ್ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಕೇಂದ್ರ ಸರ್ಕಾರ ಯೋಜನೆಯನ್ನು ಮತ್ತೊಮ್ಮೆ ಮರುಪರಿಶೀಲಿಸುವಂತೆ ಸೂಚಿಸಿದೆ ಎಂದು ಹೇಳಿದ್ದಾರೆ. ಡಬ್ಬಲ್ ಡೆಕ್ಕರ್ ವ್ಯವಸ್ಥೆ ಜಾರಿಗೆ ಬಂದರೆ ಖಾಸಗಿ ವಾಹನ ಬಳಕೆಯನ್ನು ಪ್ರೋತ್ಸಾಹಿಸುವುದರ ಜೊತೆಗೆ ಮೆಟ್ರೋದಲ್ಲಿ ಪ್ರಯಾಣ ಮಾಡುವವರ ಸಂಖ್ಯೆ ಕಡಿಮೆಯಾಗಲಿದೆ. ಹೀಗಾಗಿ ರೆಡ್ ಲೈನ್ ಮೆಟ್ರೋ ಕಾರಿಡಾರ್ ಗಳಲ್ಲಿ ಡಬ್ಬಲ್ ಡೆಕ್ಕರ್ ಬೇಡ ಎಂದು ಕೇಂದ್ರ ಸರ್ಕಾರ ಸೂಚಿಸಿದೆ ಎಂದು ತಿಳಿಸಿದ್ದಾರೆ.

**********

ಕೇಂದ್ರದ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಹತ್ತು ಕೇಂದ್ರ ಕಾರ್ಮಿಕ ಸಂಘಗಳು ಮತ್ತು ರೈತ ಸಂಘಟನೆಗಳು ಇಂದು ದೇಶಾದ್ಯಂತ ಭಾರತ ಬಂದ್‌ಗೆ ಕರೆ ನೀಡಿವೆ. ಕಾರ್ಮಿಕ ವಿರೋಧಿ ಸಂಹಿತೆಗಳನ್ನು ಹಿಂಪಡೆಯುವುದು, ಮನ್ರೇಗಾ ಮರು ಜಾರಿಗೆ ಒತ್ತಾಯಿಸಿ, ಕರೆ ನೀಡಿರುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಬೆಂಬಲಿಸಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ವಿವಿಧ ಕಾರ್ಮಿಕ ಸಂಘಗಳು ಸಾರ್ವತ್ರಿಕ ಮುಷ್ಕರಕ್ಕೆ ಕರೆ ನೀಡಿದ್ದವು. ಜಿಲ್ಲೆಯ ದೊಡ್ಡಬಳ್ಳಾಪುರ ದಲ್ಲಿ ಮುಷ್ಕರ ಬೆಂಬಲಿಸಿ ಅಂಗಡಿ, ಮುಗ್ಗಟ್ಟನ್ನು ಬಂದ್ ಮಾಡಲಾಗಿತ್ತು. ವಿವಿಧ ಕಾರ್ಮಿಕ ಸಂಘಟನೆಗಳಿಂದ ಪ್ರತಿಭಟನಾ ಮೆರವಣಿಗೆ ನಡೆಯಿತು. ಭಾರತೀಯ ಕಾರ್ಮಿಕ ಸಂಘಗಳ ರಾಷ್ಟ್ರೀಯ ಒಕ್ಕೂಟ ರಾಜ್ಯದಲ್ಲಿ ಪ್ರತಿಭಟನೆಯಿಂದ ದೂರ ಉಳಿದಿದೆ. ಮುಷ್ಕರವು ರಾಜಕೀಯ

ಪ್ರೇರಿತವಾಗಿದೆ ಎಂದು ಸಂಘಟನೆಯ ರಾಜ್ಯಾಧ್ಯಕ್ಷ ಬಿ. ವೆಂಕಟೇಶ್ ಆರೋಪಿಸಿದ್ದಾರೆ. ಕೇಂದ್ರದ ಕಾರ್ಮಿಕ ಸುಧಾರಣೆಗಳು ಕಾರ್ಮಿಕರಿಗೆ ಪ್ರಯೋಜನ ನೀಡುವ ಉದ್ದೇಶ ಹೊಂದಿದೆ ಎಂದು ಅವರು ತಿಳಿಸಿದ್ದಾರೆ.

**********

ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯ ಸ್ಥಗಿತಗೊಂಡಿದ್ದು, ಸರ್ಕಾರ ಹಿಂದುಳಿದ ಹಾಗೂ ಪರಿಶಿಷ್ಟ ಸಮುದಾಯಗಳ ಕಲ್ಯಾಣದ ಬಗ್ಗೆ ನಿರ್ಲಕ್ಷ್ಯ ವಹಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಹಿಂದುಳಿದ ಸಮುದಾಯಗಳ ೧ ಲಕ್ಷದ ೧೪ ಸಾವಿರ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳ ಸೌಕರ್ಯ ಒದಗಿಸದೆ ವಂಚಿಸಿದೆ ಎಂದು ದೂರಿದ್ದಾರೆ. ರಾಜ್ಯದಲ್ಲಿ ೨ ಲಕ್ಷ ೮೫ ಸಾವಿರ ಹುದ್ದೆಗಳು ಖಾಲಿ ಉಳಿದಿವೆ. ಮೀಸಲಾತಿ ಪ್ರಮಾಣವನ್ನು ೫೬ಕ್ಕೆ ಏರಿಸಿರುವ ಬಗ್ಗೆ ನ್ಯಾಯಲಯದಲ್ಲಿ ಸರಿಯಾಗಿ ವಾದ ಮಂಡನೆ ಮಾಡದೆ ಕಾಲಹರಣದಲ್ಲಿ ತೊಡಗಿದೆ ಎಂದು ಹೇಳಿದ್ದಾರೆ. ಬಡವರಿಗೆ ಮನೆಗಳ ಹಂಚಿಕೆ, ಗಂಗಾಕಲ್ಯಾಣ ಯೋಜನೆ ಅನುಷ್ಠಾನ ಆಗುತ್ತಿಲ್ಲ. ಮರಣ ಹೊಂದಿದ ಕುರಿಮೇಕೆಗಳ ಪರಿಹಾರ ಒದಗಿಸಬೇಕಾದ ಅನುಗ್ರಹ ಯೋಜನೆಯ ೪ನೇ ಕಂತಿನ ಹಣ ಬಿಡುಗಡೆ ಮಾಡದೆ ೪೫ ಕೋಟಿ ರೂಪಾಯಿ ಬಾಕಿ ಉಳಿಸಿಕೊಂಡಿದೆ ಎಂದು ತಿಳಿಸಿದ್ದಾರೆ.

**********

ಭ್ರೂಣ ಹತ್ಯೆ ತಡೆಯುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿರಂತರ ಜಾಗೃತಿ ಕಾರ್ಯಕ್ರಮಗಳು ನಡೆಯಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಕೆ.ಟಿ. ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಮಂಗಳೂರಿನ ಆರೋಗ್ಯ ಇಲಾಖಾ ಕಚೇರಿಯಲ್ಲಿ ಗರ್ಭಪೂರ್ವ ಮತ್ತು ಪ್ರಸವಪೂರ್ವ ಪತ್ತೆ ತಡೆ ಕಾಯ್ದೆ ತಂತ್ರ ವಿಧಾನಗಳ ಕಾಯಿದೆ ಅನುಷ್ಠಾನದ ಪರಿಶೀಲನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬದುಕುವ ಹಕ್ಕು ಪ್ರತಿಯೊಂದು ಮಗುವಿನ ಮೂಲಭೂತ ಹಕ್ಕಾಗಿದೆ ಎಂದು ಹೇಳಿದ್ದಾರೆ. ಆರೋಗ್ಯ ಇಲಾಖಾ ಅಧಿಕಾರಿಗಳು ಜಿಲ್ಲೆಯ ಎಲ್ಲಾ ಆಸ್ಪತ್ರೆ ಮತ್ತು ಸ್ಕ್ಯಾನಿಂಗ್ ಸೆಂಟರ್‌ಗಳ ಮೇಲೆ ನಿರಂತರ ನಿಗಾವಹಿಸಬೇಕು. ಪ್ರತಿಯೊಂದು ಸರ್ಕಾರಿ ಸಂಸ್ಥೆಗಳು, ಶೈಕ್ಷಣಿಕ ಸಂಸ್ಥೆಗಳು ಖಾಸಗಿ ನರ್ಸಿಂಗ್ ಹೋಮ್‌ಗಳಲ್ಲಿ ಮಕ್ಕಳ ಸಹಾಯವಾಣಿ ೧೦೯೮ ಸಂಖ್ಯೆಯನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಸೂಚಿಸಿದ್ದಾರೆ.

**********

ಮಂಡ್ಯ ಜಿಲ್ಲೆಯ ಕಾವೇರಿ ನದಿ ಪಾತ್ರದಲ್ಲಿ ವೈಜ್ಞಾನಿಕ ರೀತಿಯಲ್ಲಿ ಧಾರ್ಮಿಕ ವಿಧಿವಿಧಾನಗಳ ಆಚರಣೆ ಹಾಗೂ ಅಸ್ಥಿ ವಿಸರ್ಜನೆ ಮಾಡಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಸೂಚನೆ ನೀಡಿದ್ದಾರೆ. ನಗರಾಭಿವೃದ್ಧಿ ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಅಸ್ಥಿ ವಿಸರ್ಜನೆಯ ಜೊತೆಗೆ ಬಟ್ಟೆ ಮತ್ತು ಪೂಜಾ ಸಾಮಗ್ರಿಗಳನ್ನು ನದಿಗೆ ಎಸೆಯುವುದರಿಂದ ಮಾಲಿನ್ಯ ಹೆಚ್ಚಾಗುತ್ತಿದೆ. ಇದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಶ್ರೀರಂಗಪಟ್ಟಣ ಮುಖ್ಯಾಧಿಕಾರಿಗಳಿಗೆ ತಿಳಿಸಿದ್ದಾರೆ. ಪಶ್ಚಿಮವಾಹಿನಿ, ಸ್ನಾನಘಟ್ಟ, ಗೋಸಾಯಿ ಘಾಟ್ ಮತ್ತು ಸಂಗಮ ಸ್ಥಳಗಳಲ್ಲಿ ಸಿಸಿ ಟಿವಿ ಅಳವಡಿಸಬೇಕು ಎಂದು ಸೂಚಿಸಿದ್ದಾರೆ. ಪುರೋಹಿತರನ್ನು ಕರೆದು ಸಭೆ ನಡೆಸಿ, ವೈಜ್ಞಾನಿಕ ರೀತಿಯಲ್ಲಿ ಧಾರ್ಮಿಕ ವಿಧಿವಿಧಾನ ಕೈಗೊಳ್ಳುವಂತೆ ತಿಳಿಸಿದ್ದಾರೆ.

*****END*****